ಜಿಲ್ಲಾಪರಿಷತ್ ಮತ್ತು ಮಂಡಲ ಪಂಚಾಯತಿಗಳಿಗೆ ರೋಜ್‌ಗಾರ್ ಯೋಜನೆಯಡಿಯಲ್ಲಿ ಒದಗಿಸಿದ ಹಣದಲ್ಲಿ ದುರುಪಯೋಗ.

1457 - ಶ್ರೀ ಕೆ. ಹೆಚ್. ಹನುಮೇಗೌಡ (ಹಾಸನ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಮಂಡಲ ಪಂಚಾಯ್ತಿ ಮತ್ತು ಜಿಲ್ಲಾ ಪರಿಷತ್‌ಗಳಿಗೆ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡುತ್ತಿರುವ ರೋಜ್‌ಗಾರ್ ಯೋಜನೆಯ ಹಣವು ಜನರ ಹಿತದೃಷ್ಟಿಯಿಂದ ಖರ್ಚಾಗದೆ ದುರುಪಯೋಗವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ರೋಜ್‌ಗಾರ್ ಯೋಜನೆಗೆ ಬಿಡುಗಡೆಯಾದ ಹಣವು ದುರುಪಯೋಗವಾಗಲು ಕಾರಣಗಳೇನು?

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಈ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಕೆಲವು ಮಂಡಲ ಪಂಚಾಯತಿಗಳ ಬಗ್ಗೆ ದೂರುಗಳು ಬಂದಿರುತ್ತವೆ. ಆದರೆ ಈ ಯೋಜನೆಯ ಹಣವು ಖರ್ಚಾಗದೆ ದುರುಪಯೋಗವಾಗುತ್ತಿದೆ ಎಂಬುದು ಸರಿಯಲ್ಲ.

ಆ) ಕೆಲವು ಮಂಡಲ ಪಂಚಾಯತಿಗಳಲ್ಲಿ ತಾಂತ್ರಿಕ ಹಾಗೂ ಮೇಲ್ವಿಚಾರಣಾ ಸಿಬ್ಬಂದಿ ಕೊರತೆ ಇರುವುದರಿಂದ ಮತ್ತು ಮಂಡಲ ಪಂಚಾಯತಿಗಳಿಗೆ ನೇರವಾಗಿ ಹಣ ಬಿಡುಗಡೆಯಾಗುತ್ತಿರುವುದರಿಂದ ಕೆಲವು ಪ್ರಕರಣಗಳಲ್ಲಿ ಹಣ ದುರುಪಯೋಗದ ದೂರುಗಳು ಬರುತ್ತಿವೆ.

ಹಾಸನ ಜಿಲ್ಲೆಯಲ್ಲಿ ಕುಡಿಯುವ ನೀರಿನ ಬಗ್ಗೆ

1458 - ಶ್ರೀ ಕೆ.ಹೆಚ್. ಹನುಮೇಗೌಡ (ಹಾಸನ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಕ್ಷೇತ್ರ 1) ಗೋಳೀನಹಳ್ಳಿ, 2) ಬಂಡಿಹಳ್ಳಿ - ಹಲಸಿನ ಹಳ್ಳಿ, 3) ರಂಗನಾಥಪುರ - ಒಡ್ಡರ ಕೊಪ್ಪಲು, 4) ಗೇಕಾರವಳ್ಳಿ - ಸಮುದ್ರ ವಳ್ಳಿ, 5) ಮತ್ತು ಹನುಮಂತಪುರ 6) ಜನಿವಾರ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಗ್ರಾಮಗಳಿಗೆ 1991-92ನೇ ಸಾಲಿನಲ್ಲಿ ಕಿರು ನೀರು ಸರಬರಾಜು ಯೋಜನೆಗಳನ್ನು ಮಂಜೂರು ಮಾಡಿ, ಈ ಗ್ರಾಮಗಳ ಕುಡಿಯುವ ನೀರಿನ ತೊಂದರೆಯನ್ನು ಪರಿಹರಿಸಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳಾವುವು?

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರು) :

ಅ) ಬಂದಿದೆ. ಅವುಗಳಲ್ಲಿ ಕೆಲವು ಹಳ್ಳಿಗಳಲ್ಲಿ ಕುಡಿಯುವ ನೀರಿಗೆ ತೊಂದರೆ ಇದೆ. ಈ ಹಳ್ಳಿಗಳಲ್ಲಿಯ ಸದ್ಯದ ನೀರಿನ ಪರಿಸ್ಥಿತಿ ಈ ಕೆಳಗೆ ಕಂಡಂತೆ ಇದೆ.